**"JULY 2024 Makeup SEE"**

ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/01/ಇಎಪಿ/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
Email:dte.commissioner@gmail.com
ದಿನಾಂಕ: 05.07.2024.

## ಜ್ಞಾಪನ

ವಿಷಯ: 2020-21ನೇ ಶೈಕ್ಷಣಿಕ ಸಾಲಿನಿಂದ ಜಾರಿಯಲ್ಲಿರುವ C-20 ರ ಪಠ್ಯಕ್ರಮದಲ್ಲಿ ಪ್ರವೇಶ ಪಡೆದು 1 ರಿಂದ 6ನೇ ಸೆಮಿಸ್ಟರ್‌ಗಳಲ್ಲಿ ಅನುತ್ತೀರ್ಣಗೊಂಡಿರುವ ಮತ್ತು Makeup CIE ಕಿರು ಪರೀಕ್ಷೆಗಳಲ್ಲಿ ಕನಿಷ್ಠ ಶೇ.40 ಆಂತರಿಕ ಅಂಕಗಳನ್ನು ಪಡೆದಿರುವ (ಥಿಯರಿ ಹಾಗೂ ಪ್ರಾಯೋಗಿಕ ವಿಷಯಗಳಲ್ಲಿ) ವಿದ್ಯಾರ್ಥಿಗಳು Makeup ಪರೀಕ್ಷೆಗೆ ನೋಂದಾಯಿಸುವ ದಿನಾಂಕ ವಿಸ್ತರಿಸುವ ಕುರಿತು.

ಉಲ್ಲೇಖ:
1. ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/01/ಇಎಪಿ/2024, ದಿನಾಂಕ: 20.06.2024.
2. ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/01/ಇಎಪಿ/2024, ದಿನಾಂಕ: 02.07.2024

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಈ ಕಛೇರಿ ಜ್ಞಾಪನದಲ್ಲಿ C-20 ರ ಪಠ್ಯಕ್ರಮದಲ್ಲಿ ಪ್ರವೇಶ ಪಡೆದು 1 ರಿಂದ 6ನೇ ಸೆಮಿಸ್ಟರ್‌ಗಳಲ್ಲಿ ಅನುತ್ತೀರ್ಣಗೊಂಡಿರುವ ಮತ್ತು Makeup CIE ಕಿರು ಪರೀಕ್ಷೆಗಳಲ್ಲಿ ಕನಿಷ್ಠ ಶೇ.40 ಆಂತರಿಕ ಅಂಕಗಳನ್ನು ಪಡೆದಿರುವ (ಥಿಯರಿ ಹಾಗೂ ಪ್ರಾಯೋಗಿಕ ವಿಷಯಗಳಲ್ಲಿ) ವಿದ್ಯಾರ್ಥಿಗಳಗೆ ಜುಲೈ 2024 ರ Makeup ಪರೀಕ್ಷೆಗೆ ನೋಂದಾಯಿಸುವ ದಿನಾಂಕವನ್ನು 01.07.2024 ರವರೆಗೆ ನಿಗದಿಪಡಿಸಲಾಗಿತ್ತು.

ಹಲವು ಸಂಸ್ಥೆಗಳ ಪ್ರಾಚಾರ್ಯರು ಮತ್ತು ವಿದ್ಯಾರ್ಥಿಗಳು ಈ ಕಛೇರಿಗೆ ದೂರವಾಣಿ ಮೂಲಕ ಸಂಪರ್ಕಿಸಿ Makeup ಪರೀಕ್ಷೆಗೆ ನೋಂದಾಯಿಸುವ ದಿನಾಂಕವನ್ನು ವಿಸ್ತರಿಸಲು ಕೋರಿದ್ದ ಹಿನ್ನಲೆಯಲ್ಲಿ, ಉಲ್ಲೇಖ (2) ರ ಈ ಕಛೇರಿ ಜ್ಞಾಪನದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ Makeup ಪರೀಕ್ಷೆಗೆ ನೋಂದಾಯಿಸುವ ದಿನಾಂಕವನ್ನು 04.07.2024 ರವರೆಗೆ ವಿಸ್ತರಿಸಲಾಗಿತ್ತು.

ಮುಂದುವರೆದು, ಪ್ರಸ್ತುತ ಹಲವು ಸಂಸ್ಥೆಯ ಪ್ರಾಚಾರ್ಯರು ಮತ್ತು ವಿದ್ಯಾರ್ಥಿಗಳು ಈ ಕಛೇರಿಗೆ Makeup ಪರೀಕ್ಷೆಗೆ ನೋಂದಾಯಿಸುವ ದಿನಾಂಕವನ್ನು ವಿಸ್ತರಿಸಲು ಮತ್ತೊಮ್ಮೆ ಕೋರಿರುವ ಹಿನ್ನಲೆಯಲ್ಲಿ, Makeup ಪರೀಕ್ಷೆಗೆ ನೋಂದಾಯಿಸುವ ದಿನಾಂಕವನ್ನು 06.07.2024 ರವರೆಗೆ ವಿಸ್ತರಿಸಲಾಗಿದೆ. ತದನಂತರ ಯಾವುದೇ ಕಾರಣಕ್ಕೂ Makeup ಪರೀಕ್ಷೆಗೆ ನೋಂದಾಯಿಸುವ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ ಎಂಬ ಅಂಶವನ್ನು ವಿದ್ಯಾರ್ಥಿಗಳ ಗಮನಕ್ಕೆ ತರಲು ಪ್ರಾಚಾರ್ಯರುಗಳಗೆ ತಿಳಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ,
ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಗೆ ಮಾಹಿತಿಗಾಗಿ

ಪ್ರತಿ:
1. ಆಯುಕ್ತರ ಆಪ್ತಶಾಖೆ – ಅವಗಾಹನೆಗಾಗಿ
2. ನಿರ್ದೇಶಕರ ಆಪ್ತಶಾಖೆ – ಅವಗಾಹನೆಗಾಗಿ
3. ಕಾರ್ಯದರ್ಶಿಗಳ ಆಪ್ತಶಾಖೆ
4. ಉಪ ನಿರ್ದೇಶಕರು (ಪರೀಕ್ಷೆ)
5. ಇ-ಗವರ್ನೆನ್ಸ್ ವಿಭಾಗಕ್ಕೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
6. ಇಸಿಎಸ್/ಇಎಫ್ ಎಸ್/ಇಆರ್‌ಎಸ್ ಮುಂದಿನ ಕ್ರಮಕ್ಕಾಗಿ
7. ಸಾರ್ವಜನಿಕ ಸಂಪರ್ಕಾಧಿಕಾರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
8. ರಿಜಿಸ್ಟ್ರಾರ್ (ಪರೀಕ್ಷೆ)
9. ಅಧೀಕ್ಷಕರು (ಆರ್‌ಡಿಎಂ (1) ರಿಂದ (15))
10. ಗಣಕ ಕೇಂದ್ರ -ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
11. ಕಛೇರಿ ಪ್ರತಿ